**ಸಿವಿಲ್ ಜಡ್ಜ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಜೇವರ್ಗಿ**

| | |
|---|---|
| ಕ್ರಿಮಿನಲ್ ಪ್ರಕರಣ ಸಂಖ್ಯೆ | 486/2016 |

ದಿನಾಂಕ 25.03.2026 ರಂದು ಸಾಕ್ಷಿಗೆ ಕರೆಸಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಚಾಸಾಃ 23 ಪ್ರಾಸಾಃ 11

| | |
|---|---|
| ಹೆಸರು | ಜಾಕೀರ |
| ತಂದೆಯ ಹೆಸರು | ಹುಸೇನಸಾಬ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಡಿವೈಎಸ್‌ಪಿ |
| ವಾಸಸ್ಥಳ | ಯಾದಗಿರಿ |

**ಮುಖ್ಯ ವಿಚಾರಣೆಃ ಸ ಸ ಅ ರವರಿಂದಃ**

ಮಾರ್ಚ-2016 ರಿಂದ ಅಗಷ್ಟ-2016 ರವರೆಗೆ ಪ್ರಭಾರ ಸಿಪಿಐ ಆಗಿ ನಾನು ಜೇವರಗಿ ವೃತ್ತದಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 13.04.2016 ರಂದು ಸದರಿ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-22 ರವರಿಂದ ಪಡೆದು ಎಲ್ಲಾ ದಾಖಲೆಗಳನ್ನು ಪರಿಶೀಲನೆ ಮಾಡಿ ಅದೆ ದಿನ ಪ್ರಾ.ಆ.ಕೇ. ಯಡ್ರಾಮಿ ವೈದ್ಯಾಧಿಕಾರಿಯವರಿಂದ ಪಿಎಂಇ ವರದಿಯನ್ನು ಪಡೆದಿರುತ್ತೇನೆ. ಸಾಕ್ಷಿ ಪಿಎಂಇ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುಸಲಾಯಿತು. ಅದೆ ದಿನ ತನಿಖೆ ಪೂರ್ಣಗೊಂಡಿದ್ದು ಆರೋಪಿಯ ವಿರುದ್ಧ ಆರೋಪ ಸಾಬೀತಾದ್ದರಿಂದ ದೋಷರೋಪಣೆಯನ್ನು ಸಲ್ಲಿಸಿರುತ್ತೇನೆ.

<u>ಪಾಟೀ ಸವಾಲುಃ ಆಪಾದಿತರ ಪರ ವಕೀಲರಿಂದಃ</u>

ನಾನು ಮೃತ ನಿಂಗನಗೌಡರವರ ಪಿಎಂಇ ವರದಿಯನ್ನು ಪರಿಶೀಲನೆ ಮಾಡಿರುತ್ತೇನೆ. ದಿನಾಂಕ 13.04.2016 ರಂದು ಸದರಿ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-22 ರವರಿಂದ ಪಡೆದು ಎಲ್ಲಾ ದಾಖಲೆಗಳನ್ನು ಪರಿಶೀಲನೆ ಮಾಡಿ ಅದೆ ದಿನ ಪ್ರಾ.ಆ.ಕೇ. ಯಡ್ರಾಮಿ ವೈದ್ಯಾಧಿಕಾರಿಯವರಿಂದ ಪಿಎಂಇ ವರದಿಯನ್ನು ಪಡೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಚಾ.ಸಾ.22 ರವರಿಂದ ಕಡತ ಪಡೆದುಕೊಂಡ ನಂತರ ಪರೀಶೀಲನೆ ಮಾಡದೆ ತನಿಖೆ ಕೈಗೊಂಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಆರೋಪ ಸಾಬೀತಾಗದೆ ಇದ್ದರು ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ಸಾಕ್ಷಿದಾರರು ಹೇಳಿದಂತೆ ನನ್ನ ಲೇಖನಕ್ಕೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ.ಕೇ. ಸರಿ ಇರುತ್ತದೆ

ಜೆ.ಎಮ್.ಎಫ್.ಸಿ.
ಜೇವರ್ಗಿ